ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ಅರ್ಜಿದಾರರ ಪರ ಶ್ರೀ ಬಿ.ಪಿ.ಆರ್. ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ನಿಪಿ-1 ಎಂದು, ದೂರಿನ ದೃಢೀಕೃತ ನಕಲನ್ನು ನಿಪಿ-2 ಎಂದು, ದೋಷಾರೋಪಣಾ ಪಟ್ಟಿಯ ದೃಢೀಕೃತ ನಕಲನ್ನು ನಿಪಿ-3 ಎಂದು, ಸ್ಥಳ ಪಂಚನಾಮೆಯ ದೃಢೀಕೃತ ನಕಲನ್ನು ನಿಪಿ-4 ಎಂದು, ಪೊಲೀಸರು ನೀಡಿರುವ 133 ನೋಟಿಸ್ ನ ದೃಢೀಕೃತ ನಕಲನ್ನು ನಿಪಿ-5 ಎಂದು, 133 ನೋಟಿಸ್ ಗೆ ನೀಡಿರುವ ಉತ್ತರದ ದೃಢೀಕೃತ ನಕಲನ್ನು ನಿಪಿ-6 ಎಂದು, ಶವ ತನಿಖಾ ವರದಿಯ ದೃಢೀಕೃತ ನಕಲನ್ನು ನಿಪಿ-7 ಎಂದು, ಪಿಎಂ ವರದಿಯ ದೃಢೀಕೃತ ನಕಲನ್ನು ನಿಪಿ-8 ಎಂದು, 1ನೇ ಅರ್ಜಿದಾರರ ಆಧಾರ್ ಗುರುತಿನ ನೋಟರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ಅಸಲು ಪ್ರತಿಯೊಂದಿಗೆ ತಾಳೆ ಮಾಡಿ ಅದನ್ನು ನಿಪಿ-9 ಎಂದು, 2ನೇ ಅರ್ಜಿದಾರರ ಆಧಾರ್ ಗುರುತಿನ ನೋಟರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ಅಸಲು ಪ್ರತಿಯೊಂದಿಗೆ ತಾಳೆ ಮಾಡಿ ಅದನ್ನು ನಿಪಿ-10 ಎಂದು, ಮೃತ ಮೋಹನ್ ರಶೀದ್ ಎಂ.ಪಿ. ರವರ ಆಧಾರ್ ಗುರುತಿನ ನೋಟರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ಅಸಲು ಪ್ರತಿಯೊಂದಿಗೆ ತಾಳೆ ಮಾಡಿ ಅದನ್ನು ನಿಪಿ-11 ಎಂದು, ಮೃತ ಮೋಹನ್ ರಶೀದ್ ಎಂ.ಪಿ. ರವರ ವೇತನ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು, ಮೃತ

ಮೋಹನ್ ರಶೀದ್ ಎಂ.ಪಿ. ರವರ ಡಿ.ಎಲ್. ನೋಟರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ಅಸಲು ಪ್ರತಿಯೊಂದಿಗೆ ತಾಳೆ ಮಾಡಿ ಅದನ್ನು ನಿಪಿ-13 ಎಂದು ಗುರುತಿಸಲಾಯಿತು.

ಪಾಟೀ ಸವಾಲು 2ನೇ ಎದುರುದಾರರ ಪರ ವಕೀಲರಿಂದಃ-

ಹಾಜರಿದ್ದು ಸಮಯ ಕೋರಿದ ಕಾರಣ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ನಿವೇದಿತ ಟಿ.ಎಂ.)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯಾ ಮಂಡಳಿಯ
ಪೀಠಾಧಿಕಾರಿಗಳು